# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 944 |
| ಸದಸ್ಯರ ಹೆಸರು | : | ಶ್ರೀ ಅಡಗೂರು ಹೆಚ್. ವಿಶ್ವನಾಥ್<br>(ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | : | 13.12.2023 |
| ಉತ್ತರಿಸುವ ಸಚಿವರು | : | ಕಂದಾಯ ಸಚಿವರು |

<table>
<tr><th>ಕ್ರಮ ಸಂಖ್ಯೆ</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ಮಂಡ್ಯ ಜಿಲ್ಲೆ, ನಾಗಮಂಗಲ ತಾಲೂಕು, ಕಸಬಾ ಹೋಬಳಿ, ಬೀರೇಶ್ವರಪುರ ಗ್ರಾಮದ ವ್ಯಾಪ್ತಿಗೆ ಸೇರಿದ ಸ.ನಂ.96 ಮತ್ತು ಇತರೆ ಸರ್ವೆ ನಂಬರ್‌ಗಳಲ್ಲಿರುವ ಒಟ್ಟು ಎಷ್ಟು ಎಕರೆ ಜಮೀನು ಸರ್ಕಾರಿ ಗೋಮಾಳವಾಗಿರುತ್ತದೆ;</td><td>ಮಂಡ್ಯ ಜಿಲ್ಲೆ, ನಾಗಮಂಗಲ ತಾಲೂಕು, ಕಸಬಾ ಹೋಬಳಿ, ಬೀರೇಶ್ವರಪುರ ಗ್ರಾಮದ ವ್ಯಾಪ್ತಿಗೆ ಸೇರಿದ ಸ.ನಂ. 96 ರಲ್ಲಿ ಒಟ್ಟು ವಿಸ್ತೀರ್ಣ ಆಕಾರ್‌ಬಂದ್‌ನಂತೆ 306-27 ಎಕರೆ/ಗುಂಟೆ ಸರ್ಕಾರಿ ಗೋಮಾಳವಾಗಿದೆ. ಸದರಿ ಜಮೀನಿನ ವಿವರಗಳು ಈ ಕೆಳಗಿನಂತಿವೆ:-
<table>
<tr><th>ವಿವರ</th><th>ವಿಸ್ತೀರ್ಣ<br>(ಎಕರೆ/ಗುಂಟೆ)</th></tr>
<tr><td>ಒಟ್ಟು ಗೋಮಾಳ ಜಮೀನು</td><td>306-27</td></tr>
<tr><td>ಅರಣ್ಯ ಇಲಾಖೆಗೆ</td><td>245-23</td></tr>
<tr><td>ಸರ್ಕಾರಿ ಉದ್ದೇಶಕ್ಕಾಗಿ</td><td>5-15</td></tr>
<tr><td>ದರಖಾಸ್ತು ಮಂಜೂರು</td><td>27-02</td></tr>
<tr><td>ಉಳಿಕೆ ಗೋಮಾಳ ಜಮೀನು</td><td>28-27</td></tr>
</table>
ಇದಲ್ಲದೆ, ಸ.ನಂ. 23 ರಲ್ಲಿ 13-18 ಎಕರೆ/ಗುಂಟೆ ಜಮೀನಿದ್ದು, ಈ ಪೈಕಿ 4-29 ಎಕರೆ/ಗುಂಟೆ ದರಖಾಸ್ತು ಮಂಜೂರಾಗಿ, ಉಳಿಕೆ 8-29 ಎಕರೆ/ಗುಂಟೆ ಸರ್ಕಾರಿ ಗೋಮಾಳ ಎಂದು ಆರ್.ಟಿ.ಸಿ.ಯಲ್ಲಿ ದಾಖಲಾಗಿರುತ್ತದೆ.</td></tr>
<tr><td>(ಆ)</td><td>ಬೀರೇಶ್ವರಪುರ ಗ್ರಾಮದ ವ್ಯಾಪ್ತಿಗೆ ಸೇರಿದ ಸ.ನಂ.96ರಲ್ಲಿ ಸುಮಾರು 200 ಎಕರೆ ಗೋಮಾಳದ ಜಮೀನನ್ನು ಕೆಲವೇ ಭಲಾಢ್ಯರು ಅಕ್ರಮವಾಗಿ ಸಾಗುವಳಿ ಮಾಡಿ ಗೋಮಾಳವನ್ನು ಕಬಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಗಮನಕ್ಕೆ ಬಂದಿದೆ.</td></tr>
<tr><td>(ಇ)</td><td>ಈ ಗೋಮಾಳವು ನೂರಾರು ವರ್ಷಗಳಿಂದ ಸುಮಾರು ಐದಾರು ಗ್ರಾಮಗಳ ಜಾನುವಾರುಗಳಿಗೆ ಆಹಾರ ಮೂಲವಾಗಿದ್ದು, ಈ ಗೋಮಾಳವನ್ನು ಅಕ್ರಮವಾಗಿ ಕಬಳಿಸಿರುವವರಿಂದ ತೆರವುಗೊಳಿಸಿ ಸದರಿ ಗೋಮಾಳವನ್ನು ಶಾಶ್ವತವಾಗಿ ಮೀಸಲಿಡಲು ಸರ್ಕಾರ ಯಾವ ಕ್ರಮ ಕೈಗೊಳ್ಳುವುದು;</td><td>ಈ ಗೋಮಾಳದಲ್ಲಿನ ಒತ್ತುವರಿಯನ್ನು ತೆರವುಗೊಳಿಸಿ ಗೋಮಾಳವನ್ನು ಶಾಶ್ವತವಾಗಿ ಮೀಸಲಿಡಲು ಕ್ರಮವಹಿಸಲಾಗುತ್ತಿದೆ.</td></tr>
</table>

| | | |
|---|---|---|
| (ಈ) | ಸದರಿ ಬೀರೇಶ್ವರಪುರ ಗ್ರಾಮದ ಸ.ನಂ.62ರಲ್ಲಿನ ಹರಿಜನ ಕುಳವಾಡಿ ಜಮೀನನ್ನು/ಇನಾಮ್ತಿ ಜಮೀನನ್ನು ಅಕ್ರಮವಾಗಿ ಖಾಸಗಿ ವ್ಯಕ್ತಿ ಖರೀದಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೆಚ್‌ಒ.ಸಿ.ಆರ್:1281/79-80 ರಂತೆ ಎಂ.ಆರ್. ನಂ:1/80-81 ರಲ್ಲಿ ಮಂಜೂರಾತಿಯಾಗಿರುತ್ತದೆ. ನಂತರ ಎಂ.ಆರ್. ನಂ: 21/2005-06 ರಲ್ಲಿ ಶ್ರೀಮತಿ ರೇಣುಕಾ ಕೋಂ ಬೀರಪ್ಪ ರವರಿಗೆ ಕ್ರಯವಾಗಿರುತ್ತದೆ. ಮಂಜೂರಾತಿದಾರರು ಮಂಜೂರಾತಿಯಾದ 25 ವರ್ಷದ ನಂತರ ಕ್ರಯಕ್ಕೆ ನೀಡಿರುತ್ತಾರೆ. |
| (ಉ) | ಬಂದಿದ್ದಲ್ಲಿ, ಇದಕ್ಕೆ ಸಂಬಂಧಿಸಿದ ಕಾರ್ಯ್ವಯಡಿ ಸರ್ಕಾರದ/ಜಿಲ್ಲಾಧಿಕಾರಗಳ ಅನುಮತಿ ಇಲ್ಲದೆ ಸ.ನಂ.62ರಲ್ಲಿನ ಹರಿಜನ ಕುಳವಾಡಿ ಜಮೀನನ್ನು/ಇನಾಮ್ತಿ ಜಮೀನನ್ನು ಅಕ್ರಮವಾಗಿ ಸಾಮಾನ್ಯ ವರ್ಗದ ಖಾಸಗಿ ವ್ಯಕ್ತಿ ಖರೀದಿಸಿದ್ದು, ನೋಂದಣಿ ಮಾಡಿರುವುದನ್ನು ರದ್ದುಪಡಿಸಲು ಸರ್ಕಾರ ಕ್ರಮಕೈಗೊಳ್ಳುವುದೇ? | ಮಂಜೂರಾತಿಯಾದ ಜಮೀನನ್ನು ಶ್ರೀಮತಿ ರೇಣುಕಾ ಕೋಂ ಬೀರಪ್ಪ ಇವರು ಮಂಜೂರಾತಿಯಾದ 25 ವರ್ಷದ ನಂತರ ಕ್ರಯಕ್ಕೆ ಪಡೆದಿರುವುದರಿಂದ ನೋಂದಣಿಯನ್ನು ರದ್ದುಪಡಿಸಲು ರಹಾ ಇರುವುದಿಲ್ಲ. |

(ಕಡತ ಸಂಖ್ಯೆ:ಕಂಇ 58 ಎಲ್‌ಜಿವ್ಯೆ 2023)

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು

# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 942 |
| ಸದಸ್ಯರ ಹೆಸರು | : ಶ್ರೀ ಶರವಣ ಟಿ.ಎ.<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : 13.12.2023. |
| ಉತ್ತರಿಸುವ ಸಚಿವರು | : ಕಂದಾಯ ಸಚಿವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕಳೆದ ಮೂರು ವರ್ಷಗಳಲ್ಲಿ ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿ ಸರ್ಕಾರಿ ಭೂಮಿ ಒತ್ತುವರಿ ಬಗ್ಗೆ ಬಂದಿರುವ ದೂರುಗಳು ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮತ್ತು ವರ್ಷಾವಾರು ಮಾಹಿತಿ ನೀಡುವುದು)</td><td>ಬೆಂಗಳೂರು ನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ಸರ್ಕಾರಿ ಭೂಮಿ ಒತ್ತುವರಿ ಸಂಬಂಧ ಪ್ರಕರಣಗಳ ವಿವರ ಈ ಕೆಳಕಂಡಂತಿದೆ;-
<table>
<tr><th rowspan="2">ಜಿಲ್ಲೆ</th><th rowspan="2">ತಾಲ್ಲೂಕು</th><th colspan="3">ವರ್ಷವಾರು</th><th rowspan="2">ವಿಸ್ತೀರ್ಣ ಎ/ಗು</th></tr>
<tr><th>2021</th><th>2022</th><th>2023</th></tr>
<tr><td rowspan="6">ಬೆಂಗಳೂರು ನಗರ</td><td>ಬೆಂಗಳೂರು ಉತ್ತರ</td><td>117</td><td>145</td><td>148</td><td>410</td></tr>
<tr><td>ಯಲಹಂಕ</td><td>58</td><td>115</td><td>72</td><td>245</td></tr>
<tr><td>ಬೆಂಗಳೂರು ಪೂರ್ವ</td><td>211</td><td>218</td><td>99</td><td>528</td></tr>
<tr><td>ಬೆಂಗಳೂರು ದಕ್ಷಿಣ</td><td>174</td><td>222</td><td>131</td><td>527</td></tr>
<tr><td>ಆನೇಕಲ್</td><td>36</td><td>150</td><td>58</td><td>224</td></tr>
<tr><td>ಒಟ್ಟು</td><td>596</td><td>830</td><td>508</td><td>1934</td></tr>
<tr><td rowspan="5">ಬೆಂಗಳೂರು ಗ್ರಾಮಾಂತರ</td><td>ದೇವನಹಳ್ಳಿ</td><td>130</td><td>160</td><td>120</td><td>410</td></tr>
<tr><td>ದೊಡ್ಡಬಳ್ಳಾಪುರ</td><td>10</td><td>15</td><td>13</td><td>38</td></tr>
<tr><td>ಹೊಸಕೋಟೆ</td><td>350</td><td>400</td><td>122</td><td>872</td></tr>
<tr><td>ನೆಲಮಂಗಲ</td><td>12</td><td>10</td><td>5</td><td>27</td></tr>
<tr><td>ಒಟ್ಟು</td><td>502</td><td>585</td><td>260</td><td>1347</td></tr>
</table></td></tr>
<tr><td>ಆ)</td><td>ಸದರಿ ಭೂಮಿಯ ಅಂದಾಜು ಮೌಲ್ಯವೆಷ್ಟು; ಒತ್ತುವರಿ ತೆರವುಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳಾವುವು; (ಪ್ರಕರಣವಾರು ಮಾಹಿತಿ ನೀಡುವುದು)</td><td>ಸದರಿ ಭೂಮಿಯ ಅಂದಾಜು ಮೌಲ್ಯವು ನೋಂದಣಿ ಮತ್ತು ಮುದ್ರಾಂಕ ಇಲಾಖೆಯು ನಿಗದಿಪಡಿಸುವ ಮಾರ್ಗಸೂಚಿ/ಮಾರುಕಟ್ಟೆ ಮೌಲ್ಯಕ್ಕೆ ಅನುಗುಣವಾಗಿರುತ್ತದೆ.<br><br>ಕಂದಾಯ ಇಲಾಖೆಯಡಿ ಬರುವ ಸರ್ಕಾರಿ ಜಮೀನಿನ ಒತ್ತುವರಿಯನ್ನು ತೆರವುಗೊಳಿಸಲು ರಾಜ್ಯದ ಎಲ್ಲಾ ಜಿಲೆಗಳಲ್ಲಿ, ಜಿಲ್ಲಾಧಿಕಾರಿಯವರ ಅಧ್ಯಕ್ಷತೆಯಲ್ಲಿ ಕಾರ್ಯ ಪಡೆಗಳನ್ನು ರಚಿಸಲಾಗಿದೆ. ಅದರಂತೆ ಎಲ್ಲಾ ಜಿಲ್ಲಾಧಿಕಾರಿಗಳು ಕಾಲಬದ್ಧ ಕ್ರಿಯಾ ಯೋಜನೆ ಸಿದ್ಧಪಡಿಸಿಕೊಂಡು, ಒತ್ತುವರಿ ಆಗಿರುವ ಸರ್ಕಾರಿ ಜಮೀನುಗಳನ್ನು ತೆರವುಗೊಳಿಸಲು ಕ್ರಮವಹಿಸುತ್ತಿದ್ದಾರೆ.<br><br>ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್‌ಡಿ 20 ಎಲ್‌ಜಿಪಿ 2020, ದಿ: 20.01.2020 ರಂತೆ ಸರ್ಕಾರಿ ಜಮೀನು ಒತ್ತುವರಿ ತೆರವುಗೊಳಿಸುವುದು, ಒತ್ತುವರಿದಾರರ ವಿರುದ್ಧ ಕ್ರಮ ಜರುಗಿಸುವುದು, ಒತ್ತುವರಿ ತೆರವುಗೊಳಿಸಲು ವಿಫಲರಾಗಿರುವ ಅಧಿಕಾರಿಗಳು /ಭೂ ಕಬಳಿಕೆಗೆ ದುಷ್ಪೇರಣೆ ನೀಡಲು ನಕಲಿ ದಾಖಲೆಗಳನ್ನು ಸೃಷ್ಟಿಸಲು ಶಾಮೀಲಾಗಿರುವ ಅಧಿಕಾರಿ/ಸಿಬ್ಬಂದಿಗಳ ವಿರುದ್ಧ ಕಾನೂನು/ಶಿಸ್ತು ಕ್ರಮಗಳನ್ನು ಜರುಗಿಸಲು ಸೂಚನೆ ನೀಡಲಾಗಿದೆ.</td></tr>
<tr><td>ಇ)</td><td>ಇಲ್ಲಿಯವರೆಗೆ ಎಷ್ಟು ಸರ್ಕಾರಿ ಭೂಮಿಯನ್ನು ಮರುವಶಪಡಿಸಿಕೊಳ್ಳಲಾಗಿದೆ; ಪ್ರಕರಣವಾರು ಹಾಗೂ ವಶಪಡಿಸಿಕೊಂಡ ಭೂಮಿಯನ್ನು ಯಾವ ಉದ್ದೇಶಕ್ಕೆ ಬಳಸಲಾಗಿದೆ ಮತ್ತು ಬಳಸಿಕೊಳ್ಳಲು ಉದ್ದೇಶಿಸಲಾಗಿದೆ; (ಪ್ರಕರಣವಾರು ಮಾಹಿತಿ ನೀಡುವುದು)</td><td>ಬೆಂಗಳೂರು ನಗರ ಜಿಲ್ಲೆಯಲ್ಲಿ 1,22,918 ಎಕರೆ/ಗುಂಟೆ ಸರ್ಕಾರಿ ಜಮೀನಿದ್ದು, ಇದರಲ್ಲಿ 38,947 ಎಕರೆ/ಗುಂಟೆ ಸರ್ಕಾರಿ ಜಮೀನು ಒತ್ತುವರಿ ಇದೆ. 16,487 ಎಕರೆ/ಗುಂಟೆ ಸರ್ಕಾರಿ ಜಮೀನನ್ನು ಒತ್ತುವರಿಯಿಂದ ತೆರವುಗೊಳಿಸಲಾಗಿದೆ. ಉಳಿದಂತೆ 261 ಎಕರೆ/ಗುಂಟೆ ಜಮೀನನ್ನು ಒತ್ತುವರಿ ತೆರವುಗೊಳಿಸಲು ಬಾಕಿ ಇದೆ.<br><br>ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ 1,08,295 ಎಕರೆ/ಗುಂಟೆ ಸರ್ಕಾರಿ ಜಮೀನಿದ್ದು, ಇದರಲ್ಲಿ 9,433-00 ಎಕರೆ/ಗುಂಟೆ ಸರ್ಕಾರಿ ಜಮೀನು ಒತ್ತುವರಿ ಇದೆ. 8603-00 ಎಕರೆ/ಗುಂಟೆ ಜಮೀನನ್ನು ಒತ್ತುವರಿಯಿಂದ ತೆರವುಗೊಳಿಸಲಾಗಿದ್ದು, ಉಳಿದಂತೆ 830-00 ಎಕರೆ/ಗುಂಟೆ ಜಮೀನನ್ನು ಒತ್ತುವರಿ ತೆರವುಗೊಳಿಸಲು ಬಾಕಿ ಇದೆ.</td></tr>
</table>

| | | |
|---|---|---|
| | | ಒತ್ತುವರಿಯಿಂದ ತೆರವುಗೊಳಿಸಲಾದ ಸರ್ಕಾರಿ ಜಮೀನನ್ನು ಸಾರ್ವಜನಿಕ ಉದ್ದೇಶಗಳಾದ ಸ್ಮಶಾನ, ರಾಜೀವ ಗಾಂಧಿ ವಸತಿ ನಿಗಮ ನಿಯಮಿತ, ಶಾಲೆ, ಆಟದ ಮೈದಾನ, ಉದ್ಯಾನದಂತಹ ಅನೇಕ ಜನಪರ ಕಾರ್ಯಕ್ರಮಗಳಿಗೆ ಕಾಯ್ದಿರಿಸಲಾಗುತ್ತಿದೆ. |
| ಈ) | ಸರ್ಕಾರಿ ಭೂಮಿ ಒತ್ತುವರಿ ತಡೆಯಲು ಮತ್ತು ಸರ್ಕಾರಿ ಭೂಮಿಯನ್ನು ಸಂರಕ್ಷಣೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು? | ರಾಜ್ಯಾದ್ಯಾಂತ ಒಟ್ಟು 63,32,486 ಎಕರೆ/ಗುಂಟೆ ಸರ್ಕಾರಿ ಜಮೀನಿದ್ದು, ಇದರಲ್ಲಿ 14,72,493 ಎಕರೆ/ಗುಂಟೆ ಸರ್ಕಾರಿ ಜಮೀನು ಒತ್ತುವರಿ ಇದೆ. ವಿವಿಧ ನ್ಯಾಯಾಲಯಗಳಲ್ಲಿರುವ ಪ್ರಕರಣಗಳು, ಅಕ್ರಮ ಸಕ್ರಮ ಯೋಜನೆ ಮತ್ತು ಸಾರ್ವಜನಿಕ ಉದ್ದೇಶಗಳಿಗೆ ಬಳಕೆಯಾಗಿರುವ ಒಟ್ಟು 10,82,752 ಎಕರೆ/ಗುಂಟೆ ಜಮೀನು ಹೊರತುಪಡಿಸಿ, ಉಳಿದಂತೆ 3,89,741 ಎಕರೆ/ಗುಂಟೆ ಜಮೀನನ್ನು ಒತ್ತುವರಿಯಿಂದ ತೆರವುಗೊಳಿಸಬೇಕಾಗಿರುತ್ತದೆ. ಇದರಲ್ಲಿ 2,73,778 ಎಕರೆ/ಗುಂಟೆ ಸರ್ಕಾರಿ ಜಮೀನನ್ನು ಒತ್ತುವರಿಯಿಂದ ತೆರವುಗೊಳಿಸಲಾಗಿದೆ. ಉಳಿದಂತೆ 1,15,963 ಎಕರೆ/ಗುಂಟೆ ಜಮೀನನ್ನು ಒತ್ತುವರಿ ತೆರವುಗೊಳಿಸಲು ಬಾಕಿ ಇದೆ.<br><br>ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯದಲ್ಲಿ ಅಕ್ಟೋಬರ್-2023ರ ಅಂತ್ಯಕ್ಕೆ ಒಟ್ಟು 21,712 ಪ್ರಕರಣಗಳು ದಾಖಲಾಗಿದ್ದು, ಈ ಪೈಕಿ 16,205 ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ. 5,507 ಪ್ರಕರಣಗಳು ಬಾಕಿ ಇದೆ. ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯದಲ್ಲಿ ವಿವಿಧ ಪ್ರಕರಣಗಳಲ್ಲಿ ಈವರೆಗೂ 75 ಜನರಿಗೆ ಒಂದು ವರ್ಷದಂತೆ ಶಿಕ್ಷೆ ಹಾಗೂ ದಂಡ ವಿಧಿಸಲಾಗಿದೆ.<br><br>ಒತ್ತುವರಿ ಪ್ರಕರಣಗಳನ್ನು ಸಮರ್ಥವಾಗಿ ತಡೆಯುವ ಸಲುವಾಗಿ ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯವನ್ನು ರಚಿಸಲಾಗಿದೆ. ಒತ್ತುವರಿದಾರರ ವಿರುದ್ಧ ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲದಲ್ಲಿ, ಪ್ರಕರಣವನ್ನು ಕರ್ನಾಟಕ ಭೂ ಕಂದಾಯ ಕಾಯ್ದೆ, 1964 ಕಲಂ 192-ಎ ರನ್ವಯ ದಾಖಲಿಸಲಾಗುತ್ತಿದೆ ಹಾಗೂ ಅಕ್ರಮವಾಗಿ ಪರಭಾರೆ ಮಾಡುತ್ತಿರುವವರ ವಿರುದ್ಧ ಸಂಬಂಧಪಟ್ಟ ಪೊಲೀಸ್ ಠಾಣೆಯಲ್ಲಿ FIR ದಾಖಲಿಸಲಾಗುತ್ತಿದೆ.<br><br>ಯಾವುದೇ ಹೊಸ ಸರ್ವೆ ನಂಬರ್ ಸೃಜಿಸಲು ಅಥವಾ ಸರ್ವೆ ನಂಬರ್ ತೆಗೆದುಹಾಕಲು (ಡಿಲೀಷನ್) ಮಾಡಲು ಭೂಮಿತಂತ್ರಾಂಶದಲ್ಲಿ ಜಿಲ್ಲಾಧಿಕಾರಿಗಳು ಅಥವಾ ಉಪವಿಭಾಗಾಧಿಕಾರಿಯವರ ಆದೇಶ ದೊಂದಿಗೆ ಕ್ರಮವಹಿಸಲು ಅವಕಾಶವನ್ನುನೀಡಲಾಗಿದೆ.<br><br>ಯಾವುದೇ ಭೂಮಂಜೂರಾತಿ ಸಂದರ್ಭದಲ್ಲಿ ನಮೂನೆ 1 ರಿಂದ 5 ತುಂಬಲು ಇದ್ದ Manual ಪದ್ಧತಿಯನ್ನು ತೆಗೆದುಹಾಕಿದ್ದು ತಂತ್ರಾಂಶದ ಮೂಲಕ ಭರ್ತಿ ಮಾಡಲು ಅವಕಾಶ ಮಾಡಲಾಗಿದೆ.<br><br>ಯಾವುದೇ ಸರ್ಕಾರಿ ಭೂಮಿ ಮೇಲೆ ಅನಧಿಕೃತವಾಗಿ ಮಾಡಿರುವ ಖಾತೆ ಬದಲಾವಣೆಯ ಸಂಬಂಧ ಕರ್ನಾಟಕ ಭೂಕಂದಾಯ ಕಾಯ್ದೆ-1964ರ ಕಲಂ 136(3)ರಡಿ ಜಿಲ್ಲಾಧಿಕಾರಿಗಳು ಸುಮೋಟೊ ಪ್ರಕರಣ ದಾಖಲಿಸಿ ವಿಚಾರಣೆಗೆ ಅವಕಾಶವಿರುತ್ತದೆ. |

ಸಂಖ್ಯೆ: ಆರ್‌ಡಿ 140 ಎಲ್‌ಜಿಕ್ಯೂ 2023

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು